ದಿ: 12.02.2026

**ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ**

**ಹೊಳಲ್ಕೆರೆ.**

**ಸಿ.ಸಿ. 1003/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ರಮೇಶ್ | ಪ್ರಾ.ಸಾ:6 |
| ತಂದೆಯ/ಗಂಡನ ಹೆಸರು | : | ಗೋವಿಂದಪ್ಪ | ಚಾಸಾ:22 |
| ವಯಸ್ಸು | : | 58 ವರ್ಷ | |
| ಕೆಲಸ | : | ಬೇಕರಿ ಕೆಲಸ | ಸಾ ಪ್ರ ಬೋ |
| ವಾಸ | : | ಇಳಕಲ್ ಗ್ರಾಮ | ದಿ:12.02.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದ:**

ಚಾಸಾ.23 ಗೊತ್ತಿಲ್ಲ. ಸಾಕ್ಷಿ ನಿಪಿ.3 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.3(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಮೂರುವ ರ್ಷಗಳ ಹಿಂದೆ ಹೊಳಲ್ಕೆರೆಯ ಹೋಟೆಲ್‌ನಲ್ಲಿ ಮಾಡಿರುತ್ತೇನೆ. ಮಹಜರಿನಲ್ಲಿ ಬರೆದಿರುವ ವಿಚಾರಗಳ ಕುರಿತು ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರಿನ ಕ್ರಮವನ್ನು ಜರುಗಿಸಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದ:**

2. ದಿನಾಂಕ 23/12/2010 ರಂದು ನನ್ನ ಮತ್ತು ಚಾಸಾ.23 ರವರ ಸಮಕ್ಷಮ ಬೆಳಗ್ಗೆ 11 ರಿಂದ 12 ಗಂಟೆಯವರೆಗೆ ಮಹಜರನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ.3 ರ ಮಹಜರಿಗೆ ಸಹಕರಿಸಿದ್ದಾಗ್ಯೂ, ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದ:- ಇಲ್ಲ**

ಮರು ವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು. )

ಓ. ಹೇ. ಕೇ. ಸರಿಯಿದೆ.

ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊಳಲ್ಕೆರೆ